**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಮಾನ್ಯ ಶಾಸಕರುಗಳ ವಿಧಾನ ಸಭಾ ಕ್ಷೇತ್ರಗಳಿಗೆ ಸಮುದಾಯ ಭವನ/ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಮಂಜೂರಾತಿ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017.
3. ಸರ್ಕಾರ ಆದೇಶದ ಸಂಖ್ಯೆ: ಬಿಸಿಡಬ್ಲ್ಯೂ 546 ಬಿಎಂಎಸ್ 2022, ದಿನಾಂಕ:13.09.2022.
4. ಆಯಕ್ತರ ಪ್ರಸ್ತಾವನೆ ಸಂಖ್ಯೆ: BCWD-14011/288/2022-BCWD_COORD-BCWD, ದಿನಾಂಕ:21.11.2022.

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯ ವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-001-0-05 ರಡಿ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕಾಗಿ ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ.10.00 ಲಕ್ಷ, ತಾಲ್ಲೂಕು ಕೇಂದ್ರಸ್ಥಾನ ರೂ.25.00 ಲಕ್ಷ ಹಾಗೂ ಜಿಲ್ಲಾ ಕೇಂದ್ರಸ್ಥಾನ ರೂ.50.00 ಲಕ್ಷಗಳಂತೆ ಗರಿಷ್ಠ ಮಿತಿಯೊಳಗೊಳಪಟ್ಟು ಪ್ರವರ್ಗ-1, 2ಎ, 3ಎ ಮತ್ತು ಪ್ರವರ್ಗ-3ಬಿಗೆ ಸೇರಿದ ಜಾತಿಗಳ ನೋಂದಾಯಿತ ಸಂಘ/ಸ್ವಯಂ ಸೇವಾ ಸಂಸ್ಥೆ/ಟ್ರಸ್ಟ್‌ಗಳಿಗೆ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

ಮೇಲೆ ಓದಲಾದ (2)ರಲ್ಲಿ ದಿನಾಂಕ:05.11.2014ರ ಆದೇಶದಲ್ಲಿ ತಿಳಿಸಿರುವ ಅನುದಾನದ ಮಿತಿಯನ್ನು ಅಗತ್ಯ ಸಂದರ್ಭಗಳಲ್ಲಿ ಸಡಿಲಗೊಳಿಸಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಚ್ಚುವರಿಯಾಗಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ (3)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಮಾನ್ಯ ಶಾಸಕರುಗಳ ವಿಧಾನ ಸಭಾ ಕ್ಷೇತ್ರಗಳಿಗೆ ಒಟ್ಟು ರೂ.93.24 ಕೋಟಿಗಳ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಕ್ರಮ ಮತ್ತು ಕಟ್ಟಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಷರತ್ತುಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ (4)ರ ಆಯಕ್ತರ ಪ್ರಸ್ತಾವನೆಯಲ್ಲಿ ಸರ್ಕಾರದ ಆದೇಶದಲ್ಲಿ ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಮಂಜೂರಾದ ಒಟ್ಟಾರೆ ಅನುದಾನಕ್ಕೆ ಸಂಬಂಧಿಸಿದಂತೆ ಸಂಬಂಧಪಟ್ಟ ಮಾನ್ಯ ಶಾಸಕರಿಂದ ಕಾಮಗಾರಿಗಳ ವಿವರ ಪಡೆಯಲಾಗಿದೆ. ಸರ್ಕಾರದ ಮಾರ್ಗಸೂಚಿಗಳಲ್ಲಿ,



08/12/2022

ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರಿಗೆ ರೂ.10.00 ಲಕ್ಷಗಳವರೆಗೆ ಮಾತ್ರ ಮಂಜೂರಾತಿ ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ. ಆದರಂತೆ, ರೂ.10.00 ಲಕ್ಷಗಳವರೆಗಿನ ಮೊತ್ತಕ್ಕೆ ಸಂಬಂಧಿಸಿದಂತೆ ಕಾಮಗಾರಿಗಳಿಗೆ ಮಂಜೂರಾತಿ ಆದೇಶವನ್ನು ಹೊರಡಿಸಲಾಗಿರುತ್ತದೆ. ರೂ.10.00 ಲಕ್ಷಗಳಿಗೂ ಮೇಲ್ಪಟ್ಟ ಮೊತ್ತದ ಸಮುದಾಯ ಭವನ/ವಿದ್ಯಾರ್ಥಿ ನಿಲಯವಾರು ಕಾಮಗಾರಿಗಳಿಗೆ ಮಂಜೂರಾತಿ ಆದೇಶ ಹೊರಡಿಸುವಂತೆ ಕೋರಿ ಆಯಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 546 ಬಿಎಂಎಸ್ 2022**
**ಬೆಂಗಳೂರು, ದಿನಾಂಕ:08.12.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಮಾನ್ಯ ಶಾಸಕರುಗಳ ವಿಧಾನಸಭಾ ಕ್ಷೇತ್ರಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಒಟ್ಟಾರೆಯಾಗಿ ಮಂಜೂರಾದ ರೂ.93.24 ಕೋಟಿಗಳ ಅನುದಾನದಲ್ಲಿ ರೂ.10.00 ಲಕ್ಷಗಳಿಗೂ ಮೇಲ್ಪಟ್ಟ ಮೊತ್ತದ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅನುಬಂಧದಲ್ಲಿರುವ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಒಟ್ಟು ರೂ.59.09 ಕೋಟಿಗಳ ಅನುದಾನದಲ್ಲಿ ಕೈಗೆತ್ತಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಹಳಿಯಾಳ-ಜೋಯಿಡಾ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರೂ.535.00 ಲಕ್ಷಗಳಿಗೆ ಕಾಮಗಾರಿಗಳ ವಿವರ ಪಡೆದು ಪ್ರತ್ಯೇಕ ಪ್ರಸ್ತಾವನೆ ಸಲ್ಲಿಸತಕ್ಕದ್ದು.

ಈ ಹಿಂದೆ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 546 ಬಿಎಂಎಸ್ 2022, ದಿನಾಂಕ:13.09.2022 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 546 ಬಿಎಂಎಸ್ 2022, ದಿನಾಂಕ:15.11.2022ರ ಆದೇಶದಲ್ಲಿನ ಷರತ್ತುಗಳು ಯಥಾವತ್ತಾಗಿ ಅನ್ವಯಿಸುತ್ತವೆ.

ಸದರಿ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮ ಲೆಕ್ಕಶೀರ್ಷಿಕೆ: 2225-03-001-0-05-103 ರಡಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Sheenparveen 08/12/2022

**(ಷಾಹೀನ್ ಪರ್ವೀನ್ . ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**<u>ಇವರಿಗೆ:-</u>**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.

2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ), ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಸಂಬಂಧಪಟ್ಟ ಜಿಲ್ಲಾಧಿಕಾರಿಗಳು (ಆಯುಕ್ತರ ಮುಖಾಂತರ)
5. ಸಂಬಂಧಪಟ್ಟ ಜಿಲ್ಲಾ ಅಧಿಕಾರಿ, ಹಿಂದುಳಿ ವರ್ಗಗಳ ಕಲ್ಯಾಣ ಇಲಾಖೆ. (ಆಯುಕ್ತರ ಮುಖಾಂತರ)
6. ಖಜಾನಾಧಿಕಾರಿಗಳು, ರಾಜ್ಯಹುಜೂರ್ ಖಜಾನೆ, ಬೆಂಗಳೂರು.

ಪ್ರತಿ:-

1. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
3. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ ಬೆಂಗಳೂರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.